(ಇ) ಹಾಗಿದ್ದಲ್ಲಿ, ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು)

(ಈ) ಹಾಗಿದ್ದಲ್ಲಿ, 2014–15ನೇ ಸಾಲಿನಲ್ಲಿ ಬಿಡುಗಡೆ ಆದ ಅನುದಾನ ಎಷ್ಟು? (ವಿವರ ನೀಡುವುದು)

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಒಟ್ಟು 08 ಪ್ರಾಥಮಿಕ ಆರೋಗ್ಯ ಕೇಂದ್ರ ಗಳು ಹಾಗೂ 01 ನಗರ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿವೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳು–1, ಕಮಠಾಣಾ–2, ಅಣಾದೂರು–3, ಮುನ್ನವಳ್ಳಿ–4, ನಿರ್ಣಾ–5, ರಂಜೋಳಖೇಣಿ–6, ಚಾಂಗ್ಲೇರಾ–7, ಬಗದಲ್–8, ಬೇಮಳಖೇಡ, ಹಾಗೂ ನಗರ ಆರೋಗ್ಯ ಕೇಂದ್ರ ಬಿದ್ರಿ ಕಾಲೋನಿ.

(ಆ) ಬೀದರ್ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 2013–14ನೇ ಸಾಲಿನಲ್ಲಿ ಕಟ್ಟಡ ನಿರ್ಮಾಣ ಹಾಗೂ ದುರಸ್ಥಿತಿಗೆ ಅನುದಾನ ಬಿಡುಗಡೆ ಆಗಿರುವುದಿಲ್ಲ.

(ಇ) ಉದ್ಭವಿಸುವುದಿಲ್ಲ.

(ಈ) 2014–15ನೇ ಸಾಲಿನಲ್ಲಿ ಕಟ್ಟಡ ಹಾಗೂ ದುರಸ್ಥಿಗೆ ಯಾವುದೇ ಅನುದಾನ ಬಿಡುಗಡೆ ಆಗಿರುವುದಿಲ್ಲ.

ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು:

748 (1484); ಶ್ರೀ ಬಾಲಕೃಷ್ಣ ಸಿ. ಎನ್. (ಶ್ರವಣಬೆಳಗೊಳ)

(ಅ) ಚನ್ನರಾಯಪಟ್ಟಣ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದಜೇಗೇ ರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಸಾರ್ವಜನಿಕ ಸರ್ಕಾರಿ ಆಸ್ಪತ್ತೆಯನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ಚನ್ನರಾಯಪಟ್ಟಣದಲ್ಲಿ ಡಯಾಲಿಸಿಸ್ ಕೇಂದ್ರವನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಊ) ಹಾಗಿದ್ದಲ್ಲಿ, ಯಾವಾಗ ಡಯಾಲಿಸಿಸ್ ಕೇಂದ್ರವನ್ನು ತೆರೆಯಲಾಗುವುದು? (ವಿವರಗಳನ್ನು ನೀಡುವುದು)

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ಇರುವುದಿಲ್ಲ.

(ಆ) ಉದ್ಭವಿಸುವುದಿಲ್ಲ.

(ಇ) ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಗಮನಕ್ಕೆ ಬಂದಿದೆ. ಮೂಲಭೂತ ಸೌಕರ್ಯಗಳ ಕೊರತೆ ಇರುವುದಿಲ್ಲ.

(ಈ) ಚನ್ನರಾಯಪಟ್ಟಣ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ 8 ತಜ್ಞರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 5 ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 3 ತಜ್ಞ ವೈದ್ಯರ ಕೊರತೆ ಇರುತ್ತದೆ. ಖಾಲಿ ಇರುವ ತಜ್ಞ ವೈದ್ಯರು ಮತ್ತು ಸಿಬ್ಬಂದಿ ವರ್ಗದವರ ಹುದ್ದೆಗಳನ್ನು ನೀಡಲಾಗಿದ್ದು, ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಂದ ಕುರಿತಂತೆ ಅಧಿಸೂಚನೆ ಹೊರಸಿಡಲಾಗಿದೆ. ಈ ಹುದ್ದೆಗಳಿಗೆ ಸಂಬಂಧಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಚೆ ಪತ್ರವನ್ನು ಪಡೆದು, ತದ ನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಮಗಳ್ವನಯ ವರ್ಗಿಕರಿಸಿ, ತದನಂತರ

ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

(ಊ) ಇಲ್ಲ.

(ಊ) ಅನ್ವಯಿಸುವುದಿಲ್ಲ.

ಬಿಡದಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ ಪ್ರಾರಂಭಿಸುವುದು

749 (875); ಶ್ರೀ ಬಾಲಕೃಷ್ಣ ಹೆಚ್. ಪಿ. (ಮಾಗಡಿ)

(ಅ) ರಾಮನಗರ ತಾಲ್ಲೂಕು, ಬಿಡದಿ ಹೋಬಳಿ, ಬಿಡದಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣವಿಲ್ಲದೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದರೆ, ಬಸ್ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು;

(ಇ) ಯಾವ ಕಾಲಮಿತಿಯಲ್ಲಿ ಬಸ್ ನಿಲ್ದಾಣ ನಿರ್ಮಿಸಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು)

(ಅ) ಬಂದಿದೆ.

(ಆ) ಪ್ರಥಮ ಹಂತದಲ್ಲಿ ಬಸ್ ನಿಲ್ದಾಣ ಮಾಡಲು ಭೂಸ್ವಾಧೀನ ಪ್ರಕ್ರಿಯೆಗಳು ಪ್ರಗತಿಯಲ್ಲಿದ್ದು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆಯ ಆರ್ಥಿಕ ಹಾಗೂ ಸಂಚಾರದ ಅವಶ್ಯಕತೆಗೆ ಅನುಗುಣವಾಗಿ ಈ ಬಗ್ಗೆ ಸೂಕ್ತ ಕ್ರಮ ಜರುಗಿಸಲಾಗುವುದು.